**All India Radio: Bangalore**
**Regional Bulletin In Kannada**
**19.04.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸುಭದ್ರವಾಗಿದೆ - ಗೃಹ ಡಾ. ಜಿ. ಪರಮೇಶ್ವರ್
2. ಯುವ ಜನತೆ ತಂತ್ರಜ್ಞಾನದ ಸದುಪಯೋಗಪಡಿಸಿಕೊಳ್ಳುವಂತೆ ಇಸ್ರೋ ಮಾಜಿ ಅಧ್ಯಕ್ಷ ಕಿರಣ್ ಕುಮಾರ್ ಕರೆ
3. ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ನಡೆಸಿದ ಜೆಇಇ ಫಲಿತಾಂಶ ಪ್ರಕಟ ; ರಾಜ್ಯದ ಹರೆನ್ ಸಾತ್ವಿಕ್‌ಗೆ ಶೇಕಡ ೧೦೦ರಷ್ಟು ಅಂಕ
4. ಮುಂದಿನ ೫ ದಿನ ರಾಜ್ಯದ ವಿವಿಧೆಡೆ ಗುಡುಗು ಸಹಿತ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ರಾಮನಗರದಲ್ಲಿ ಉದ್ಯಮಿ ಮೇಲೆ ಗುಂಡಿನ ದಾಳಿ ನಡೆದಿದ್ದು, ಈ ಬಗ್ಗೆ ಹೆಚ್ಚಿನ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಾಯಾಳುವನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಕಳೆದ ವರ್ಷಕ್ಕೆ ಹೋಲಿಸಿದರೆ ಸೈಬರ್ ಪ್ರಕರಣಗಳು ಸೇರಿದಂತೆ ಎಲ್ಲ ಪ್ರಕರಣಗಳು ಕಡಿಮೆಯಾಗಿವೆ ಎಂದು ಸ್ಪಷ್ಟಪಡಿಸಿದ್ದಾರೆ. ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮೂಲ ಉದ್ದೇಶವಿರುವುದು ಯಾವ ಸಮುದಾಯ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕವಾಗಿ ಯಾವ ಸ್ಥಿತಿಯಲ್ಲಿದೆ ಎಂಬುದನ್ನು ಅಧ್ಯಯನ ಮಾಡಿ ಸರ್ಕಾರಕ್ಕೆ ತಿಳಿಸುವುದು ಎಂದು ಹೇಳಿದ್ದಾರೆ. ಇದೇ ವೇಳೆ ಸಿಇಟಿ ಪರೀಕ್ಷೆ ವೇಳೆ ಜನಿವಾರ ತೆಗೆಸಿರುವುದು ತಪ್ಪು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಪ್ರತಿಭೆ ಯಾರೊಬ್ಬರ ಸ್ವತ್ತು ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನಲ್ಲಿ ನಡೆದ ಕುರುಬ ಸಮಾಜದ ಸಾಂಸ್ಕೃತಿಕ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು, ಕುರುಬ ಸಮುದಾಯದ ಸಂಸ್ಕೃತಿ ದರ್ಶನ ಮಾಲೆಯ ೨೧ ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿದರು. ಜ್ಞಾನ ತಿಳಿವಳಿಕೆಯಲ್ಲಿ ಸ್ಪಷ್ಟತೆ ಇರಬೇಕು ಎಂದು ಕರೆ ನೀಡಿದ್ದಾರೆ. ಬಸವಣ್ಣ ೮೫೦ ವರ್ಷಗಳ ಹಿಂದೆಯೇ ಅನುಭವ ಮಂಟಪ ರಚಿಸಿ ಸಮ ಸಮಾಜ ನಿರ್ಮಾಣಕ್ಕೆ ಮುನ್ನುಡಿ ಬರೆದಿದ್ದರು ಎಂದು ಹೇಳಿದ್ದಾರೆ.

<><><><>

ಬೆಂಗಳೂರಿನ ಜವಾಹರ ಲಾಲ್ ನೆಹರು ತಾರಾಲಯದಲ್ಲಿಂದು ಯು.ಆರ್. ರಾವ್ ಉಪಗ್ರಹ ಕೇಂದ್ರ ಮತ್ತು ಜವಾಹರ ಲಾಲ್ ನೆಹರು ತಾರಾಲಯ ಸಹಯೋಗದೊಂದಿಗೆ ಆರ್ಯಭಟ ಉಡಾವಣೆಯ ಸುವರ್ಣ ಮಹೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್, ಭಾರತದ ಶ್ರೇಷ್ಠ ಭೌತಶಾಸ್ತ್ರಜ್ಞ ಮತ್ತು ಖಗೋಳಶಾಸ್ತ್ರಜ್ಞ ವಿಕ್ರಮ್ ಸಾರಾಭಾಯಿ, ಭೌತಶಾಸ್ತ್ರಜ್ಞ ಹೋಮಿ. ಜೆ ಭಾಭಾ ರಂತಹ ಭಾರತ ಕಂಡ ಶ್ರೇಷ್ಠ ವಿಜ್ಞಾನಿಗಳು ತಮ್ಮ ಅನನ್ಯ ದೃಷ್ಟಿಕೋನದೊಂದಿಗೆ ಭಾರತದ ಬಾಹ್ಯಾಕಾಶ ಕಾರ್ಯಕ್ರಮದ ರೂವಾರಿಗಳಾಗಿ ಕಾರ್ಯನಿರ್ವಹಿಸಿದ್ದರು. ಇಂದಿನ ಯುವಜನರು ದೇಶ ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ತಂತ್ರಜ್ಞಾನ ಹೇಗೆ ಬಳಸಿಕೊಳ್ಳಬಹುದು ಎಂಬುದರ ಕುರಿತು ಚಿಂತಿಸಬೇಕು ಎಂದು ತಿಳಿಸಿದ್ದಾರೆ. ಉದ್ಘಾಟನಾ ಭಾಷಣದಲ್ಲಿ ಎಂ. ಶಂಕರನ್ ಮಾತನಾಡಿ, ಭಾರತದ ಬಾಹ್ಯಾಕಾಶ ಪಯಣದಲ್ಲಿ ಆರ್ಯಭಟ ಉಪಗ್ರಹ ನಿರ್ವಹಿಸಿದ ಪಾತ್ರ ಕುರಿತು ಸಮಗ್ರ ಚಿತ್ರಣ ನೀಡಿದ್ದಾರೆ. ಇಲ್ಲಿಯವರೆಗೆ ಭಾರತ ೧೨೦ಕ್ಕೂ ಅಧಿಕ ಉಪಗ್ರಹಗಳ ಉಡವಾಣೆ ಮಾಡಿದ್ದು, ಇದರಲ್ಲಿ ಶೇಕಡ ೫೦ಕ್ಕಿಂತಲೂ ಹೆಚ್ಚು ಉಪಗ್ರಹಗಳು ಇನ್ನೂ ಕಾರ್ಯ ನಿರ್ವಹಿಸುತ್ತಿವೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಡಾ. ಅನ್ನಪೂರ್ಣಿ ಸುಬ್ರಮಣಿಯಮ್, ನಮ್ಮ ಪೂರ್ವಜರು, ವಿಜ್ಞಾನಿಗಳು ಬಿಟ್ಟು ಹೋಗಿರುವ ಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಸಾಧಿಸುವ ಛಲದೊಂದಿಗೆ

ಆತ್ಮವಿಶ್ವಾಸ ಬೆಳೆಸಿಕೊಳ್ಳುವುದು ಯಾವುದೇ ಯೋಜನೆಯ ಯಶಸ್ಸಿಗೆ ಆಧಾರಸ್ತಂಭವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕಾರ್ಯಕ್ರಮದಲ್ಲಿ ಆರ್ಯಭಟ ಉಪಗ್ರಹದ ಪಯಣದ ಕುರಿತ ಸಮಗ್ರ ಮಾಹಿತಿಯುಳ್ಳ ಸಾಕ್ಷ್ಯಚಿತ್ರವನ್ನು ಪ್ರದರ್ಶಿಸಲಾಯಿತು.

<><><><>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ - ಎನ್‌ಟಿಎ ಇಂದು ಪ್ರಸಕ್ತ ವರ್ಷದ ಜಂಟಿ ಪ್ರವೇಶ ಪರೀಕ್ಷೆ - ಜೆಇಇ ೨೦೨೫ ಸೆಷನ್-೨ರ ಪೇಪರ್-೧ರ ಫಲಿತಾಂಶ ಅನ್ನು ಪ್ರಕಟಿಸಿದೆ. ಈ ಭಾರಿ ಒಟ್ಟು ೨೪ ವಿದ್ಯಾರ್ಥಿಗಳು ಶೇಕಡ ನೂರಕ್ಕೆ ನೂರು ಅಂಕಗಳಿಸಿದ್ದಾರೆ. ಕರ್ನಾಟಕದ ಹರೆನ್ ಸಾತ್ವಿಕ್ ಶೇಕಡ ೧೦೦ ಅಂಕ ಗಳಿಸಿದ್ದಾರೆ. ಎನ್‌ಟಿಎ ಜೆಇಇ ಮುಖ್ಯ ಪರೀಕ್ಷೆಯ ಫಲಿತಾಂಶವನ್ನು ಕಟ್-ಆಫ್ ಸಮೇತವಾಗಿ ಪ್ರಕಟಿಸಿದ್ದು, ಫಲಿತಾಂಶ ಜಾಲತಾಣ jeemain.nta.nic.in ದಲ್ಲಿ ಲಭ್ಯವಿದೆ. ಜೆಇಇ ಮೇನ್‌ನ ಏಪ್ರಿಲ್ ಸೆಷನ್‌ಅನ್ನು ಇದೇ ತಿಂಗಳ ೨ ರಿಂದ ೯ರ ನಡುವೆ ಎನ್‌ಟಿಎ ನಡೆಸಿತ್ತು. ಸೆಷನ್-೨ರ ಪತ್ರಿಕೆ - ೧ ಕ್ಕೆ  ೭ ಲಕ್ಷದ ೮೧ ಸಾವಿರದ ೮೭೧ ವಿದ್ಯಾರ್ಥಿನಿಯರು ಹಾಗೂ ೩ ಲಕ್ಷದ ೧೦ ಸಾವಿರದ ೪೭೯ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು ೯ ಲಕ್ಷದ ೯೨ ಸಾವಿರದ ૩೫೦ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಜೆಇಇ ಮೇನ್-೨೦೨೫ ಈ ವರ್ಷ ಜನವರಿ ಮತ್ತು ಏಪ್ರಿಲ್‌ನಲ್ಲಿ ಎರಡು ಸುತ್ತುಗಳಲ್ಲಿ ನಡೆಸಲಾಗಿದೆ. ಎರಡು ಬಾರಿ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿ ಎರಡರಲ್ಲಿ ಉತ್ತಮ ಅಂಕಗಳಿಸಿದ ಪರೀಕ್ಷೆಯನ್ನು ಅಂತಿಮ ಅರ್ಹತಾ ಪಟ್ಟಿಗೆ ಪರಿಗಣಿಸಲಾಗುವುದು ಎಂದು ಎನ್‌ಟಿಎ ತಿಳಿಸಿದೆ.  ಇದು ಪ್ರತಿಷ್ಠಿತ ಜೆಇಇ ಅಡ್ವಾನ್ಸ್‌ಡ್‌ಗೆ ಅರ್ಹತಾ ಪರೀಕ್ಷೆಯಾಗಿದೆ. ಇದರಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಭಾರತೀಯ ತಂತ್ರಜ್ಞಾನ ಸಂಸ್ಥೆ-ಐಐಟಿಗೆ ಪ್ರವೇಶ ಪಡೆಯಬಹುದು.

<><><><>

ಶಿವಮೊಗ್ಗ ಜಿಲ್ಲೆಯಲ್ಲಿ ಮಂಗನ ಕಾಯಿಲೆಯಿಂದ ಬಳಲುತ್ತಿದ್ದ ಬಾಲಕನೋರ್ವ ಸಾವನ್ನಪ್ಪಿದ್ದು ಇದು ಈ ವರ್ಷದ ಎರಡನೇ ಪ್ರಕರಣವಾಗಿದೆ. ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಕೋಣಂದೂರು ಸಮೀಪದ ದತ್ತರಾಜಪುರ ಗ್ರಾಮದ ರಚಿತ್ ಸಾವನ್ನಪ್ಪಿದ ಬಾಲಕ. ಕಳೆದ ೧೫ ದಿನಗಳ ಹಿಂದೆ ರಚಿತ್ ಮತ್ತು ಆತನ ಸಹೋದರಿಗೆ ಸೋಂಕು ದೃಢಪಟ್ಟಿತ್ತು. ತೀರ್ಥಹಳ್ಳಿ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮಣಿಪಾಲ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು. ಕೆಎಫ್‌ಡಿಯಿಂದ ಬಾಲಕ ಸಾವಿನ ಪ್ರಕರಣದ ತನಿಖೆ ನಡೆಸಿ ವರದಿ ನೀಡಲು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆರೋಗ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><><>

ಕಳೆದ ಎರಡು ದಿನಗಳಿಂದ ದಾವಣಗೆರೆ ಜಿಲ್ಲೆಯ ಹಲವೆಡೆ ಬಿರುಗಾಳಿ ಸಹಿತ ಮಳೆಯಾಗುತ್ತಿದ್ದು, ತೋಟಗಾರಿಕೆ ಬೆಳೆಗಳಿಗೆ ಹಾನಿಯಾಗಿದೆ. ಜಗಳೂರು, ಹೊನ್ನಾಳಿ ತಾಲ್ಲೂಕಿನಲ್ಲಿ ಬಿರುಗಾಳಿಯಿಂದ ಅಡಿಕೆ, ತೆಂಗು, ಪಪ್ಪಾಯ, ಬಾಳೆ ಬೆಳೆಗಳು ನೆಲಕ್ಕುರುಳಿದ್ದು, ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಜಗಳೂರು ತಾಲೂಕಿನ ಮರಿಕಟ್ಟೆ ಗ್ರಾಮದಲ್ಲಿ ಹತ್ತಾರು ಎಕರೆಯಲ್ಲಿ ಕೊಯ್ಲಿಗೆ ಬಂದಿದ್ದ ಪಪ್ಪಾಯ ಬಿರುಗಾಳಿಯ ರಭಸಕ್ಕೆ ನೆಲಕ್ಕೆ ಬಿದ್ದಿದ್ದು, ಕೃಷಿ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><><>

ಯಕೃತ್ತಿನ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಜನರು ಎಣ್ಣೆಯುಕ್ತ ಮತ್ತು ಜಿಡ್ಡಿನ ಆಹಾರವನ್ನು ಕಡಿಮೆಗೊಳಿಸಿ, ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸಲು ಇಂದು ವಿಶ್ವ ಯಕೃತ್ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ ಯಕೃತ್ತಿಕ ಕಾಯಿಲೆಗಳು ಭಾರತದಲ್ಲಿ ಸಾವಿಗೆ ಹತ್ತನೆಯ ಸಾಮಾನ್ಯ ಕಾರಣವಾಗಿದೆ. ವ್ಯಾಯಾಮದ ಕೊರತೆ, ಅಪೌಷ್ಠಿಕ ಆಹಾರಗಳ ಸೇವನೆ ಕೂಡ ಇದಕ್ಕೆ ಮೂಲ ಕಾರಣವಾಗಿದೆ. ಈ ವರ್ಷದ ವಿಶ್ವ ಯಕೃತ್ ದಿನದ ವಿಷಯ 'ಆಹಾರವೇ ಔಷಧ' ಎಂಬುದಾಗಿದೆ. ಆಹಾರದ ಆಯ್ಕೆ ಮತ್ತು ಸಮತೋಲಿತ ಆಹಾರದ ಮೂಲಕ ಯಕೃತ್ತಿನ ಕಾಯಿಲೆಗಳನ್ನು ತಡೆಗಟ್ಟುವಿಕೆಯಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತವೆ.

<><><><>

ರಾಜ್ಯದ ವಿವಿಧೆಡೆ ಮಳೆಯಾಗಿದೆ. ಧಾರವಾಡದ ಅಣ್ಣಿಗೇರಿಯಲ್ಲಿ ೭ ಸೆಂಟಿ ಮೀಟರ್, ಬಾಗಲಕೋಟೆಯ ಬಿಳಗಿಯಲ್ಲಿ ಹಾಗೂ ಕೊಡಗಿನ ಕುಶಾಲನಗರದಲ್ಲಿ ೪ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೫ ದಿನಗಳಲ್ಲಿ ರಾಜ್ಯದ ವಿವಿಧೆಡೆ ಗುಡುಗು ಮಿಂಚು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರಿನಲ್ಲಿ ಇಂದು ಮತ್ತು ನಾಳೆ ಗುಡುಗು ಸಮೇತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಏಪ್ರಿಲ್ ೨೧ರಂದು ಬೆಳಿಗ್ಗೆ ೧೦ ರಿಂದ ೧ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದೆ ಎಂದು ಯಾದಗಿರಿ ಉದ್ಯೋಗಾಧಿಕಾರಿ ಬಸವರಾಜ್ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಡಳಿತ ಭವನದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.
2. ಪ್ರಸಕ್ತ ಸಾಲಿನ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಪಂಗಡ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ, ತರಬೇತಿ ಪಡೆದ ಅರ್ಹ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ಆರಂಭಕ್ಕೆ ಸಹಾಯಧನ ನೀಡಲಾಗುವುದು ಎಂದು ದಾವಣಗೆರೆ ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕಿ ಕಾವ್ಯ ತಿಳಸಿದ್ದಾರೆ
3. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯ ನಿರ್ವಹಿಸುತ್ತಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮೌಲಾನ ಆಜಾದ್ ಮಾದರಿ ಶಾಲೆಗಳಲ್ಲಿ ೬ನೇ ತರಗತಿ ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>